2·72 (144)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72ರಡಿಯಲ್ಲಿ ನೀಡಿರುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)ರವರ ಹೇಳಿಕೆ.**

**ವಿಷಯ:**

ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುತ್ತಿರುವ ಡಿಪ್ಲೋಮೋ ಉತ್ತರ ಪತ್ರಿಕೆಗಳ ಮೌಲ್ಯಮಾಪನಕ್ಕೆ ನೀಡುವ ಸಂಭಾವನೆಯನ್ನು ಪರಿಷ್ಕರಿಸಿ 8 ವರ್ಷಗಳಾಗಿದ್ದು, ಮೌಲ್ಯಮಾಪನ ಹಾಗೂ ಪ್ರಾಯೋಗಿಕ ಪರೀಕ್ಷೆಗಳ ಸಂಭಾವನೆ ಮತ್ತು ದಿನಭತ್ಯೆ ಬಹಳ ಕಡಿಮೆ ನೀಡುತ್ತಿರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು.

**ಉತ್ತರ**

ಪಾಲಿಟೆಕ್ನಿಕ್‌ಗಳ ಉತ್ತರ ಪತ್ರಿಕೆ ಮೌಲ್ಯಮಾಪಕರಿಗೆ ಹಾಗೂ ಪರೀಕ್ಷಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವವರಿಗೆ ಸರ್ಕಾರದ ಪತ್ರ ಸಂಖ್ಯೆ: ಇಡಿ 132 ಟಿಪಿಇ 2013, ದಿನಾಂಕ:21.02.2014ರನ್ವಯ 2013ನೇ ನವೆಂಬರ್ ಸೆಮಿಸ್ಟರ್ ಪರೀಕ್ಷೆಯಿಂದ ಅನ್ವಯಿಸುವಂತೆ ಸಂಭಾವನೆ ದರಗಳನ್ನು ಪರಿಷ್ಕರಿಸಲಾಗಿರುತ್ತದೆ. ಮುಂದುವರೆದು, ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ ದಿನಾಂಕ:21.02.2014 ರಿಂದ ಮುಂದಿನ 05 ವರ್ಷಗಳವರೆಗೆ ಸಂಭಾವನೆ ದರ ಪರಿಷ್ಕರಣೆಗೆ ಪ್ರಸ್ತಾವನೆಯನ್ನು ಸಲ್ಲಿಸಬಾರದೆಂದು ತಾಂತ್ರಿಕ ಶಿಕ್ಷಣ ನಿರ್ದೇಶಕರಿಗೆ ತಿಳಿಸಲಾಗಿತ್ತು.

ತದನಂತರ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲ್ಪಡುವ ಡಿಪ್ಲೋಮಾ ಪರೀಕ್ಷೆಗಳಿಗಾಗಿ ಕಾರ್ಯನಿರ್ವಹಿಸುವ ಅಧಿಕಾರಿ/ಬೋಧಕ/ಬೋಧಕೇತರ/ಕಾರ್ಯಕಾರಿ/ಸಿಬ್ಬಂದಿ ವರ್ಗದವರಿಗೆ ನೀಡಲಾಗುತ್ತಿರುವ ಪರೀಕ್ಷಾ ಸಂಭಾವನೆ ಹಾಗೂ ದಿನಭತ್ಯೆಗಳನ್ನು ಪರಿಷ್ಕರಿಸುವ ಸಂಬಂಧ ಕಡತವನ್ನು ದಿನಾಂಕ:04.02.2020ರಂದು ಆರ್ಥಿಕ ಇಲಾಖೆಯ ಸಹಮತಿಗೆ ಕಳುಹಿಸಿದ್ದು, ದಿನಾಂಕ:21.05.2020ರಂದು ನೀಡಿರುವ ಅಭಿಪ್ರಾಯದಲ್ಲಿ ಪರೀಕ್ಷಾ ಸಂಭಾವನೆ ಹಾಗೂ ದಿನಭತ್ಯೆಗಳನ್ನು ಪರಿಷ್ಕರಿಸಲು ಪ್ರಸ್ತುತ ಕಂಡುಬರುತ್ತಿರುವ ಆರ್ಥಿಕ ನಿರ್ಬಂಧನೆಗಳ ಹಿನ್ನೆಲೆಯಲ್ಲಿ ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ.

**ಇಡಿ 32 ಟಿಪಿಇ 2021**

**(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)**
ಉಪ ಮುಖ್ಯ ಮಂತ್ರಿಗಳು
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)